# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ 43/2022-23

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 14/09/2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:-** ದಿನಾಂಕ. 05.09.2022 ರಂದು ನಡೆದ ವಾರ್ಡ್ ಸಂಖ್ಯೆ. 109ರ ಸಮಿತಿ ಸಭೆಯ ನಡವಳಿಗಳು.

**ಉಲ್ಲೇಖ:-** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21,
ದಿ. 21.09.2020.

**ಸ್ಥಳ:** ಬಿಬಿಎಂಪಿ ಕಛೇರಿ, ಮಾಗಡಿ ರಸ್ತೆ, 4ನೇ ಕ್ರಾಸ್,

**ಸಮಯ:** ಬೆಳಿಗ್ಗೆ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| | | |
|---|---|---|
| 1 | ಶ್ರೀ ಎಂ.ಎಸ್.ಉಮೇಶ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀಮತಿ ಹೇಮಲತ ಜೆ. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, |
| 3 | ಶ್ರೀ ಎಂ. ಶಿವಪ್ರಸಾದ್ | ಕಂದಾಯ ನಿರೀಕ್ಷಕರು |
| 4 | ಶ್ರೀ ವಿ.ಶಂಕರ್ | ಎ.ಎಸ್.ಎಸ್.ಆರ್ ವಾರ್ಡ್ ಸಂಖ್ಯೆ. 109 |
| 5 | ಶ್ರೀ ಕಿಷನ್.ಟಿ | ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ. 109 |
| 6 | ಶ್ರೀ ನರ್ಹವಾಲ್ | ಸದಸ್ಯರು |
| 7 | ಸಾರ್ವಜನಿಕರು | |

**ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಗಳೊಂದಿಗೆ ಈ ಕೆಳಕಂಡ ಅಂಶಗಳನ್ನು ಚರ್ಚಿಸಲಾಯಿತು.**

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀ ಎಂ.ಎಸ್. ಉಮೇಶ್ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.
2. ಓ.ಟಿ.ಸಿ ರಸ್ತೆಯಲ್ಲಿ ಮಳೆ ನೀರು ಸರ್ಮಗವಾಗಿ ಚರಂಡಿಗಳಿಗೆ ಹರಿಯದೇ ರಸ್ತೆಯಲ್ಲೇ ನಿಂತು ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ಬಗ್ಗೆ.
3. ಮಾಮೂಲ್‌ಪೇಟೆಯ ಬೆಳ್ಳಿ ಬಸವಣ್ಣ ರಸ್ತೆಯಲ್ಲಿಯೂ ಸಹ ಮಳೆ ನೀರು ನಿಂತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ.
4. ಬಿ.ವಿ.ಕೆ. ಐಯ್ಯಂಗಾರ್ ರಸ್ತೆಯಲ್ಲಿ ಹಾಕಿರುವ ಕಾಂಕ್ರಿಟ್ ಸಮ ಮಟ್ಟದಲ್ಲಿ ಹಾಕದೇ ವಾಹನ ಸವಾರರಿಗೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚಿಸಲಾಗಿದೆ.
5. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಕಸ ಮತ್ತು ಮಣ್ಣಿನ ಹೂಳು ತೆಗೆಯುವ ಬಗ್ಗೆ ಚರ್ಚೆ
6. ವಾರ್ಡ್ ವ್ಯಾಪ್ತಿಯಲ್ಲಿನ ಗಲ್ಲಿ ರಸ್ತೆಗಳಲ್ಲಿ ದ್ವಿಚಕ್ರ ವಾಹನಗಳನ್ನು ರಸ್ತೆಗೆ ಅಡ್ಡಲಾಗಿ ನಿಲ್ಲಿಸಿ ಪಾದಚಾರಿಗಳಿಗೆ ತೊಂದರೆಯಾಗಿರುವ ಬಗ್ಗೆ.
7. ವಾರ್ಡ್ ಕೆಲವು ರಸ್ತೆಗಳಲ್ಲಿ ಬೀದಿ ದೀಪಗಳನ್ನು ದುರಸ್ಥಿ ಮಾಡಿಸುವ ಬಗ್ಗೆ ಸಾರ್ವಜನಿಕರು ಕೋರಿರುತ್ತಾರೆ.
8. ಪಿ.ಓ.ಡಬ್ಲ್ಯೂ. ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿರುತ್ತದೆ.

9. ಸಾರ್ವಜನಿಕರ ಶೌಚಾಲಯಗಳನ್ನು ಸರಿಯಾದ ರೀತಿಯಲ್ಲಿ ಬಳಸಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸಲಹೆ.

ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನಿರ್ಣಯ:-

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತ್ತು.

ಕಾರ್ಯದರ್ಶಿ
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 109
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು :

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಛೇರಿ ಕಡತಕ್ಕೆ.